## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಕೆ.ಎಲ್.ಇ ಸೊಸೈಟಿಯ ಕಾಲೇಜ್ ಆಫ್ ಫಾರ್ಮಸಿ, ನಿಪ್ಪಾಣಿ, ಬೆಳಗಾವಿ ಇವರಿಗೆ 2022-23ನೇ ಶೈಕ್ಷಣಿಕ ಸಾಲಿಗೆ ಬಿ-ಫಾರ್ಮಸಿ ಕೋರ್ಸ್‌ನ ಪ್ರವೇಶ ಮಿತಿಯನ್ನು ಹೆಚ್ಚಿಸಲು ಹಾಗೂ ಹೊಸದಾಗಿ ಎಂ-ಫಾರ್ಮ ಕೋರ್ಸ್ ಪ್ರಾರಂಭಿಸಲು ಅನುಮತಿ ನೀಡುವ ಬಗ್ಗೆ.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ಆಕುಕ 81 ಪಿಟಿಡಿ 2002, ದಿನಾಂಕ:29.8.2002
2. ಸರ್ಕಾರದ ಆದೇಶ ಸಂಖ್ಯೆ: ಆಕುಕ 338 ಪಿಟಿಡಿ 2005, ದಿನಾಂಕ:07.9.2006
3. ನಿಬಂಧಕರು, ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ಮಹಾವಿದ್ಯಾಲಯ ಇವರ ವರದಿ ಸಂಖ್ಯೆ: ACA/AFF/F/PH-54/2022-23, ದಿನಾಂಕ: 07.09.2022.
4. ಔಷಧ ನಿಯಂತ್ರಕರು, ಔಷಧ ನಿಯಂತ್ರಣ ಇಲಾಖೆ, ಬೆಂಗಳೂರು ಇವರ ವರದಿ ಸಂಖ್ಯೆ:ಔನಿಇ/69/ಯೋಜನೆ/2022-23, ದಿನಾಂಕ:17.11.2022.
5. ಉನ್ನತಾಧಿಕಾರಿ ಸಮಿತಿ ಸಭೆ ದಿನಾಂಕ:21.11.2022ರ ಸಭಾ ನಡವಳಿಗಳು

********

**ಪ್ರಸ್ತಾವನೆ**

ಮೇಲೆ ಓದಲಾದ ಕ್ರ.ಸಂ (1)ರ ಸರ್ಕಾರದ ಆದೇಶದಲ್ಲಿ ಕೆಎಲ್‌ಇ ಸೊಸೈಟಿಯ ಕಾಲೇಜ್ ಆಫ್ ಫಾರ್ಮಸಿ ನಿಪ್ಪಾಣಿ ಸಂಸ್ಥೆಗೆ 2002-2003ನೇ ಸಾಲಿನಿಂದ ಹೊಸದಾಗಿ 40 ವಿದ್ಯಾರ್ಥಿಗಳ ಪ್ರವೇಶ ಮಿತಿಯೊಂದಿಗೆ ಬಿ-ಫಾರ್ಮಸಿ ಕೋರ್ಸ್ ಪ್ರಾರಂಭಿಸಲು ಸರ್ಕಾರದ ಅನುಮತಿ ನೀಡಲಾಗಿರುತ್ತದೆ.

ಮೇಲೆ ಓದಲಾದ ಕ್ರ.ಸಂ (2)ರ ಸರ್ಕಾರದ ಆದೇಶದಲ್ಲಿ ಕೆಎಲ್‌ಇ ಸೊಸೈಟಿಯ ಕಾಲೇಜ್ ಆಫ್ ಫಾರ್ಮಸಿ ನಿಪ್ಪಾಣಿ ಸಂಸ್ಥೆಗೆ 2005-2006 ಶೈಕ್ಷಣಿಕ ಸಾಲಿನಿಂದ ಬಿ-ಫಾರ್ಮಸಿ ಕೋರ್ಸ್‌ನ ಪ್ರವೇಶಮಿತಿಯನ್ನು 40 ರಿಂದ 60ಕ್ಕೆ ಹೆಚ್ಚಿಸಲು ಸರ್ಕಾರದ ಅನುಮತಿ ನೀಡಲಾಗಿರುತ್ತದೆ.

ಮೇಲೆ ಓದಲಾದ ಕ್ರ.ಸಂ.(3)ರ ವರದಿಯಲ್ಲಿ ನಿಬಂಧಕರು, ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ಮಹಾವಿದ್ಯಾಲಯ ಇವರು ಕೆ.ಎಲ್.ಇ ಸೊಸೈಟಿಯ ಕಾಲೇಜ್ ಆಫ್ ಫಾರ್ಮಸಿ, ನಿಪ್ಪಾಣಿ, ಬೆಳಗಾವಿ ಇವರಿಗೆ 2022-23ನೇ ಸಾಲಿಗೆ ಬಿ-ಫಾರ್ಮಸಿ ಕೋರ್ಸ್ ಪ್ರವೇಶ ಮಿತಿಯನ್ನು 60 ರಿಂದ 100ಕ್ಕೆ ಹೆಚ್ಚಿಸಲು ಹಾಗೂ ಹೊಸದಾಗಿ ಎಂ-ಫಾರ್ಮ ಕೋರ್ಸ್‌ಫಾರ್ಮಸ್ಯೂಟಿಕಲ್ ಕೆಮಿಸ್ಟ್ರೀ ವಿಭಾಗವನ್ನು 10 ಸೀಟುಗಳ ಪ್ರವೇಶ ಮಿತಿಯೊಂದಿಗೆ ಪ್ರಾರಂಭಿಸಲು ಶಿಫಾರಸ್ಸು ಮಾಡಿರುತ್ತಾರೆ.

SRG

...2

KLE Society's
College of Pharmacy Nipani
Inward No. 182/2022-23
Date. 17/02/2023

ಔಷಧ ನಿಯಂತ್ರಕರು, ಮೇಲೆ ಓದಲಾದ ಕ್ರ.ಸಂ.(4)ರ ವರದಿಯಲ್ಲಿ 2022-23ನೇ ಶೈಕ್ಷಣಿಕ ಸಾಲಿನಿಂದ ಹೊಸದಾಗಿ ಬಿ-ಫಾರ್ಮಸಿ ಕೋರ್ಸ್‌ನ ಪ್ರವೇಶ ಮಿತಿಯನ್ನು 60 ರಿಂದ 100ಕ್ಕೆ ಹೆಚ್ಚಿಸಲು ಮತ್ತು ಎಂ-ಫಾರ್ಮ ಕೋರ್ಸ್ (ಫಾರ್ಮಸ್ಯೂಟಿಕಲ್ ಕೆಮಿಸ್ಟ್ರಿ) ವಿಭಾಗವನ್ನು ಪ್ರಾರಂಭಿಸುವ ಮೊದಲು PCI ಇವರಿಂದ ಅನುಮತಿ ಪಡೆಯಬೇಕೆಂಬ ಷರತ್ತಿನೊಂದಿಗೆ ಹಾಗೂ ಎಂ-ಫಾರ್ಮ ಕೋರ್ಸ್ (ಫಾರ್ಮಸ್ಯೂಟಿಕಲ್ ಕೆಮಿಸ್ಟ್ರಿ) ವಿಭಾಗದಲ್ಲಿ ಸ್ನಾತಕೋತ್ತರ ಸಂಶೋಧನಾ ಮಾರ್ಗದರ್ಶಕರಾಗಲು ಅರ್ಹವಿರುವ ಬೋಧನಾ ಸಿಬ್ಬಂದಿ ಒಂದು ಮಾತ್ರ ಆಗಿರುವುದರಿಂದ 05 ಸೀಟುಗಳ ಪ್ರವೇಶಮಿತಿಯೊಂದಿಗೆ ಪ್ರಾರಂಭಿಸಲು ಅನುಮತಿ ನೀಡಬಹುದೆಂದು ಶಿಫಾರಸ್ಸು ಮಾಡಿರುತ್ತಾರೆ.

ಮೇಲೆ ಓದಲಾದ ಕ್ರ.ಸಂ.(5)ರ ದಿನಾಂಕ:21.11.2022ರಂದು ನಡೆದ ಉನ್ನತಾಧಿಕಾರಿ ಸಮಿತಿ ಸಭೆಯಲ್ಲಿ ಕೆಎಲ್‌ಇ ಕಾಲೇಜ್ ಆಫ್ ಫಾರ್ಮಸಿ ನಿಪ್ಪಾಣಿ, ಬೆಳಗಾವಿ ಇವರಿಗೆ 2022-2023ನೇ ಸಾಲಿನಿಂದ ಬಿ-ಫಾರ್ಮಸಿ ಕೋರ್ಸಿನ ಪ್ರವೇಶಮಿತಿಯನ್ನು 60-100ಕ್ಕೆ ಹೆಚ್ಚಿಸಲು ಹಾಗೂ ಹೊಸದಾಗಿ ಎಂ-ಫಾರ್ಮ ಕೋರ್ಸ್ (ಫಾರ್ಮಸ್ಯೂಟಿಕಲ್ ಕೆಮಿಸ್ಟ್ರಿ) ವಿಭಾಗವನ್ನು 05 ಸೀಟುಗಳ ಪ್ರವೇಶಮಿತಿಯೊಂದಿಗೆ ಪ್ರಾರಂಭಿಸಲು PCI ಅನುಮತಿ ಪಡೆಯುವ ಷರತ್ತಿಗೊಳಪಟ್ಟು ನಿರಾಕ್ಷೇಪಣಾ ಪತ್ರ ನೀಡಲು ಶಿಫಾರಸ್ಸು ಮಾಡಲಾಯಿತು.

ಔಷಧ ನಿಯಂತ್ರಕರು ಹಾಗೂ ನಿಬಂಧಕರು, RGUHS ಇವರ ವರದಿಗಳು ಮತ್ತು ಲಭ್ಯವಿರುವ ದಾಖಲೆಗಳನ್ನು ಕೂಲಂಕಷವಾಗಿ ಪರಿಶೀಲಿಸಿದ ಸರ್ಕಾರವು, ಕೆ.ಎಲ್.ಇ ಸೊಸೈಟಿಯ ಕಾಲೇಜ್ ಆಫ್ ಫಾರ್ಮಸಿ, ನಿಪ್ಪಾಣಿ, ಬೆಳಗಾವಿ ಇವರಿಗೆ 2022-23ನೇ ಸಾಲಿಗೆ ಬಿ-ಫಾರ್ಮಸಿ ಕೋರ್ಸ್ ಪ್ರವೇಶ ಮಿತಿಯನ್ನು 60 ರಿಂದ 100ಕ್ಕೆ ಹೆಚ್ಚಿಸಲು ಹಾಗೂ ಹೊಸದಾಗಿ ಎಂ-ಫಾರ್ಮ ಕೋರ್ಸ್ (ಫಾರ್ಮಸ್ಯೂಟಿಕಲ್ ಕೆಮಿಸ್ಟ್ರಿ) ವಿಭಾಗವನ್ನು 05 ಸೀಟುಗಳ ಪ್ರವೇಶ ಮಿತಿಯೊಂದಿಗೆ ಪ್ರಾರಂಭಿಸಲು PCI ಇವರಿಂದ ಅನುಮೋದನೆ ಪಡೆಯುವ ಷರತ್ತಿಗೊಳಪಟ್ಟು ನಿರಾಕ್ಷೇಪಣಾ ಪತ್ರ ನೀಡಲು ಸರ್ಕಾರವು ನಿರ್ಧರಿಸಿದೆ. ಅದರಂತೆ, ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:ಆಕುಕ 140 ಐಎಂಎಂ 2022,**
**ಬೆಂಗಳೂರು, ದಿನಾಂಕ: 07.02.2023**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ಕೆ.ಎಲ್.ಇ ಕಾಲೇಜ್ ಆಫ್ ಫಾರ್ಮಸಿ, ಅಕ್ಕೋಳ್ ರಸ್ತೆ, ನಿಪ್ಪಾಣಿ, ಬೆಳಗಾವಿ-591237 ಇವರಿಗೆ 2022-23ನೇ ಶೈಕ್ಷಣಿಕ ಸಾಲಿಗೆ ಬಿ-ಫಾರ್ಮಸಿ ಕೋರ್ಸ್‌ನ ಪ್ರವೇಶ ಮಿತಿಯನ್ನು 60 ರಿಂದ 100ಕ್ಕೆ ಹೆಚ್ಚಿಸಲು ಹಾಗೂ ಹೊಸದಾಗಿ ಎಂ-ಫಾರ್ಮ ಕೋರ್ಸ್ (ಫಾರ್ಮಸ್ಯೂಟಿಕಲ್ ಕೆಮಿಸ್ಟ್ರಿ) ವಿಭಾಗವನ್ನು 05 ಸೀಟುಗಳ ಪ್ರವೇಶ ಮಿತಿಯೊಂದಿಗೆ ಪ್ರಾರಂಭಿಸಲು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಸರ್ಕಾರದ ನಿರಾಕ್ಷೇಪಣಾ ಪತ್ರ ನೀಡಲಾಗಿದೆ.

1. ಬಿ-ಫಾರ್ಮ ಕೋರ್ಸ್‌ನ ಸೀಟುಗಳನ್ನು ಹೆಚ್ಚಿಸುವ ಮುನ್ನ ಅಗತ್ಯವಿರುವ ಎಲ್ಲಾ ಮೂಲಭೂತ ಸೌಲಭ್ಯಗಳು ಹಾಗೂ ಸಿಬ್ಬಂದಿಯನ್ನು ಹೊಂದಿರತಕ್ಕದ್ದು.
2. ಎಂ-ಫಾರ್ಮ ಕೋರ್ಸ್ ಪ್ರಾರಂಭಿಸುವ ಮುನ್ನ PCI ನಿಂದ ಅನುಮೋದನೆ ಪಡೆಯತಕ್ಕದ್ದು.

SRG

3. ಸರ್ಕಾರದ ಸೀಟುಗಳ ಹಂಚಿಕೆಯಲ್ಲಿ ಪ್ರವೇಶಕ್ಕೆ ಹಾಲಿ ಜಾರಿಯಲ್ಲಿರುವ ನಿಯಮ/ಆದೇಶಗಳಿಗೆ ಸಂಸ್ಥೆಯು ಬದ್ಧವಾಗಿರಬೇಕು ಮತ್ತು ಸರ್ಕಾರಿ ಕೋಟಾ ಸೀಟುಗಳನ್ನು ಬಿಟ್ಟುಕೊಡತಕ್ಕದ್ದು.

4. RGUHS ಮತ್ತು PCI ನಿಗದಿಪಡಿಸಿರುವ ಪರಿನಿಯಮಾವಳಿಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.

5. ರಾಜ್ಯ/ಕೇಂದ್ರ ಸರ್ಕಾರವು ಕಾಲಕಾಲಕ್ಕೆ ನೀಡುವ ಸೂಚನೆ ಹಾಗೂ ಆದೇಶಗಳನ್ನು ಪಾಲಿಸತಕ್ಕದ್ದು.

6. ಈ ಕಾಲೇಜಿಗೆ ಕರ್ನಾಟಕ ಸರ್ಕಾರದ ವತಿಯಿಂದ ಯಾವುದೇ ರೀತಿಯ ಅನುದಾನ, ಆರ್ಥಿಕ ಸೌಲಭ್ಯಗಳನ್ನು ನೀಡಲಾಗುವುದಿಲ್ಲ. ಇದು ಶಾಶ್ವತ ಅನುದಾನ ರಹಿತ ಷರತ್ತಿಗೆ ಒಳಪಟ್ಟಿರುತ್ತದೆ.

7. ಸರ್ಕಾರ/ಪ್ರಾಧಿಕಾರದ ಪೂರ್ವಾನುಮತಿಯಿಲ್ಲದೆ, ಯಾವುದೇ ಕಾರಣಕ್ಕೂ ಕಾಲೇಜಿನ ಹೆಸರು ಮತ್ತು ವಿಳಾಸವನ್ನು ಬದಲಾಯಿಸುವಂತಿಲ್ಲ.

8. ಸರ್ಕಾರವು ಕಾಲಕಾಲಕ್ಕೆ ನಿಗದಿಪಡಿಸುವ ಕೋರ್ಸ್‌ನ ಶುಲ್ಕಗಳನ್ನು ಮಾತ್ರ ವಿದ್ಯಾರ್ಥಿಗಳಿಂದ ಪಡೆಯತಕ್ಕದ್ದು ಮತ್ತು ಸಕ್ಷಮ ಪ್ರಾಧಿಕಾರದಿಂದ ಮಂಜೂರಾದ ಸೀಟುಗಳಲ್ಲಿ ಕಾಲಕಾಲಕ್ಕೆ ಸರ್ಕಾರವು ನಿಗದಿಪಡಿಸುವ ಅನುಪಾತದಲ್ಲಿ ಸರ್ಕಾರಕ್ಕೆ ಸೀಟುಗಳನ್ನು ಬಿಟ್ಟುಕೊಡತಕ್ಕದ್ದು.

9. ಸಂಸ್ಥೆಯ ಆರ್ಥಿಕ ಸ್ಥಿತಿಯನ್ನು ಔಷಧ ನಿಯಂತ್ರಕರು, ಔಷಧ ನಿಯಂತ್ರಣ ಇಲಾಖೆ, ಇವರು, ಖಚಿತಪಡಿಸಿಕೊಳ್ಳುವುದು.

10. ಸರ್ಕಾರ ವಿಧಿಸಿರುವ ಮೇಲ್ಕಂಡ ಯಾವುದೇ ಒಂದು ಷರತ್ತನ್ನು ಉಲ್ಲಂಘಿಸಿದಲ್ಲಿ ಸಂಯೋಜನೆ/ಮಂಜೂರಾತಿಯನ್ನು ಹಿಂತೆಗೆದುಕೊಳ್ಳಲಾಗುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

SR Gorawar 7/2/23

**(ಶೈಲಾ ಆರ್. ಗೊರವರ)**
ಸರ್ಕಾರದ ಅಧೀನ ಕಾರ್ಯದರ್ಶಿ
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ
(ಭಾವೈಪ ಮತ್ತು ಸಮನ್ವಯ)

**ಇವರಿಗೆ:**

1. ಔಷಧ ನಿಯಂತ್ರಕರು, ಔಷಧ ನಿಯಂತ್ರಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು.
2. ಕುಲಪತಿಗಳು, ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ಮಹಾವಿದ್ಯಾಲಯ, 4ನೇ 'ಟಿ' ಬ್ಲಾಕ್, ಜಯನಗರ, ಬೆಂಗಳೂರು-41.

3. ಪ್ರಾಂಶುಪಾಲರು, ಸರ್ಕಾರಿ ಔಷಧ ವಿಜ್ಞಾನ ಮಹಾವಿದ್ಯಾಲಯ, ಪಿ. ಕಾಳಿಂಗರಾವ್ ರಸ್ತೆ, ಬೆಂಗಳೂರು-560027.
4. ಪ್ರಾಂಶುಪಾಲರು, ಕೆ.ಎಲ್.ಇ ಕಾಲೇಜ್ ಆಫ್ ಫಾರ್ಮಸಿ, ಅಕ್ಕೋಳ್ ರಸ್ತೆ, ನಿಪ್ಪಾಣಿ, ಬೆಳಗಾವಿ-591237.
5. ಶಾಖೆಯ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

**ಪ್ರತಿಗಳು:-**

1. ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು-1.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರ ಪತ್ರಾಂಕಿತ ಆಪ್ತ ಕಾರ್ಯದರ್ಶಿ.
3. ಸರ್ಕಾರದ ಜಂಟಿ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರ ಆಪ್ತ ಸಹಾಯಕ.

KLE Society's
College of Pharmacy Nipani
Inward No. 182/2022-23
Date. 17/02/2023